**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ವಾದಿ ಪರವಾಗಿ ಕುಮಾರಿ ಎಸ್.ಹೆಚ್.ಬಿ. ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈ ದಾವೆಗೆ ಪೂರಕವಾಗಿ ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಈ ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿ.ಪಿ.-1 ರಿಂದ 3 | ಮೂರು ಪಹಣಿ |
| ನಿ.ಪಿ.-4 | ಮುಟೇಷನ್ |

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಖರ್ಚು ಸಹಿತ ಡಿಕ್ರಿ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ 1 ರಿಂದ 3ನೇ ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಚಿಂಚೋಳಿ**